ಭತ್ತದ ಬೆಂಬಲ ಬೆಲೆ

ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು)

ಅ) ಸರ್ಕಾರದಿಂದ ಭತ್ತದ ಹಾಗೂ ಇನ್ನಿತರ ಬೆಳೆಗಳಿಗೆ ನಿಗದಿಪಡಿಸಿದ ಬೆಂಬಲ ಬೆಲೆಗಿಂತ ಇನ್ನು ಹೆಚ್ಚಿಗೆ ದರ ನಿಗದಿಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ ಯಾವ ಕ್ರಮವನ್ನು ಕೈಗೊಳ್ಳಲಾಗುವುದು (ವಿವರ ಒದಗಿಸುವುದು)

ಆ) ಸಿಂಧನೂರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ಭತ್ತದ ಖರೀದಿ ಕೇಂದ್ರಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ? ಇದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು? (ವಿವರ ಒದಗಿಸುವುದು),

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು)

ಅ) ಕೇಂದ್ರ ಸರ್ಕಾರದ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಭತ್ತಕ್ಕೆ ₹ 1310/– ಪ್ರತಿ ಕ್ವಿಂಟಾಲ್‌ಗೆ ದರ ನಿಗದಿಪಡಿಸಲಾಗಿತ್ತು.

ರಾಜ್ಯ ಸರ್ಕಾರದಿಂದ ಸಾಮಾನ್ಯ ಶ್ರೇಣಿ ಭತ್ತಕ್ಕೆ ₹ 290/– ಪ್ರತಿ ಕ್ವಿಂಟಾಲ್‌ಗೆ ಪ್ರೋತ್ಸಾಹಧನವನ್ನು ಹೆಚ್ಚುವರಿಯಾಗಿ ನಿಗದಿಪಡಿಸಲಾಗಿದೆ

ಆ) ದಿ:2–11–2013ರಂದು ರಾಯಚೂರು ಜಿಲ್ಲೆಯ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ, ಭತ್ತದ ಆವಕ ಹೆಚ್ಚಿನ ಪ್ರಮಾಣದಲ್ಲಿ ಇನ್ನೂ ಮಾರುಕಟ್ಟೆಗೆ ಬರುತ್ತಿಲ್ಲ ಹಾಗೂ ಭತ್ತಕ್ಕೆ ಹೆಚ್ಚಿನ ಬೆಲೆ ಸಧ್ಯ ಇರುವುದರಿಂದ ಬೆಂಬಲ ಬೆಲೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆಯುವ ಅವಶ್ಯಕತೆ ಇರದೇ ಇದ್ದದ್ದನ್ನು ತೀರ್ಮಾನಿಸಲಾಗಿದೆ ಆದರೆ, ಎಲ್ಲಾ ಪೂರ್ವಭಾವಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಬಲೆ ಕಡಿಮೆಯಾದಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಿ ರೈತರಿಂದ ಭತ್ತ ಖರೀದಿ ಮಾಡಲಾಗುವುದು.